## ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳಾದ ಶ್ರೀ ಎನ್.ರವಿಕುಮಾರ್ ಕೇಶವ ಪ್ರಸಾದ್ ಎಸ್, ಪ್ರತಾಪ್ ಸಿಂಹ ನಾಯಕ್, ಸಿ.ಟಿ ರವಿ, ಎನ್. ರವಿಕುಮಾರ್, ಡಿ.ಎಸ್ ತಳವಾರ್ ಸಾಬಣ್ಣ ಹಾಗೂ ಡಾ|| ಧನಂಜಯ ಸರ್ಜಿ ಇವರುಗಳು ನಿಯಮ 330 ರಡಿ ಕೋರಿರುವ ಪ್ರಶ್ನೆಗೆ ಉತ್ತರಿಸುವ ಬಗ್ಗೆ.

**ಸೂಚನೆ:**

ಪರಿಶಿಷ್ಟ ಜಾತಿ ಮತ್ತು ಪಂಗಡಗಳಲ್ಲಿ ಶೈಕ್ಷಣಿಕ ಜಾಗೃತಿ ಹೆಚ್ಚಾದಂತೆ ವಸತಿ ಶಾಲೆ ಹಾಗೂ ಹಾಸ್ಟೆಲ್ ಅವಲಂಬನೆ ಹೆಚ್ಚಾಗಿದೆ. ವರ್ಷದಿಂದ ವರ್ಷಕ್ಕೆ ಬೇಡಿಕೆ ವಿಪರೀತವಾಗಿದೆ. ಆದರೆ, ಬಣ್ಣ ಬಣ್ಣದ ಕನಸು ಕಟ್ಟಿಕೊಂಡು ವಸತಿ ಶಾಲೆ, ಹಾಸ್ಟೆಲ್‌ಗೆ ಪ್ರವೇಶ ಪಡೆಯುವ ಮಕ್ಕಳಿಗೆ ಮೊದಲು ದರ್ಶನವಾಗುವುದೇ ಸೌಲಭ್ಯಗಳ ಮರೀಚಿಕೆಯ ತೋರಣ. ಕಾಲಕಾಲಕ್ಕೆ ಸರ್ಕಾರವು ಸಮಸ್ಯೆಯ ಆಳ ಅರಿಯದ ಪರಿಣಾಮ ಹಾಸ್ಟೆಲ್ ಮತ್ತು ವಸತಿ ಶಾಲೆಗಳಲ್ಲಿ ಸಮಸ್ಯೆಗಳು ಬೃಹದಾಕಾರವಾಗಿ ಬೆಳೆದು ನಿಂತಿದ್ದು, ಮಕ್ಕಳು ಸೌಲಭ್ಯ ಸಿಗದೆ ಅಕ್ಷರಶಃ ಶೋಷಣೆಗೆ ಒಳಗಾಗುತ್ತಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯಡಿ ನಿರ್ವಹಣೆಯಾಗುತ್ತಿರುವ ಹಾಸ್ಟೆಲ್, ವಸತಿ ನಿಲಯಗಳು ಗುಣಮಟ್ಟದ ಆಹಾರದ ಕೊರತೆ, ಆಶ್ರಯ ಕೊರತೆ, ಮೂಲಸೌಕರ್ಯಗಳ ಕೊರತೆ, ನಿರ್ವಹಣೆಯ ಕೊರತೆ, ವಾರ್ಡನ್‌ಗಳ ಕೊರತೆ ಮತ್ತು ಹೀಗೆ ಹತ್ತಾರು ಸಮಸ್ಯೆಗಳನ್ನು ಎದುರಿಸುತ್ತಿವೆ. ಹಾಸ್ಟೆಲ್‌ಗಳು ಮತ್ತು ವಸತಿ ಶಾಲೆಗಳು ದುಸ್ಥಿತಿಯಲ್ಲಿವೆ. ಅಲ್ಲಿ ಸರಿಯಾದ ಶೌಚಗೃಹ, ಸ್ನಾಹಗೃಹಗಳು ಇಲ್ಲದೇ ತೆರೆದ ಜಾಗದಲ್ಲಿ ನಿತ್ಯಕರ್ಮಗಳನ್ನು ಪೂರೈಸಬೇಕಿದೆ. ಹೀಗೆ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿರುವ ವಸತಿ ಶಾಲೆಗಳು ಮತ್ತು ಹಾಸ್ಟೆಲ್ ಗಳಲ್ಲಿ ಕಲಿಕೆ ಮಾಡುತ್ತಿರುವ ಸಾವಿರಾರು ವಿದ್ಯಾರ್ಥಿಗಳು ಸಂಕಷ್ಟದಲ್ಲಿದ್ದು, ಅವರ ಕಲಿಕೆಗೆ ಕಷ್ಟವಾಗುತ್ತಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 68 ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆಗಳು, 1215 ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳನ್ನು ಹಾಗೂ 713 ಡಾ||ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ, ವಿವರ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | | |
|---|---|---|---|---|
| | | ಬಾಲಕ | ಬಾಲಕಿ | ಒಟ್ಟು |
| 01 | ವಸತಿ ಶಾಲೆಗಳು | 68 | | 68 |
| 02 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 917 | 298 | 1215 |
| 03 | ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು | 415 | 298 | 713 |
| | **ಒಟ್ಟು :-** | **1332** | **596** | **1996** |

**ವಿದ್ಯಾರ್ಥಿ ನಿಲಯಗಳ ಪ್ರವೇಶ:-**

- 2024-25ನೇ ಸಾಲಿಗೆ ಇಲಾಖೆಯ ವಿದ್ಯಾರ್ಥಿ ನಿಲಯಗಳಿಗೆ ಕೆಳಕಂಡಂತೆ ವಿದ್ಯಾರ್ಥಿಗಳು ದಾಖಲಾಗಿರುತ್ತದೆ ವಿವರ ಕೆಳಕಂಡಂತಿದೆ.

| ಕ್ರ. ಸಂ | ನಿಲಯಗಳ ವಿವರ | ಮಂಜೂರಾತಿ ಸಂಖ್ಯೆ | ದಾಖಲಾತಿ ಸಂಖ್ಯೆ |
|---|---|---|---|
| 01 | ಸರ್ಕಾರಿ ವಸತಿ ಶಾಲೆಗಳು | 8,500 | 6059 |
| 02 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 90194 | 101475 |
| 03 | ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು | 76447 | 118699 |
| | **ಒಟ್ಟು :-** | **175141** | **226233** |

- ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿನಾಂಕ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ.
- 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ಸರ್ಕಾರದ ಆದೇಶ ಸಂಖ್ಯೆ:ಸಕಇ 190 ಪಕವಿ 2022, ದಿನಾಂಕ:11-04-2022 ರಲ್ಲಿ 2022-23ನೇ ಸಾಲಿನಿಂದ ಇಲಾಖೆ ವಿದ್ಯಾರ್ಥಿ ನಿಲಯಗಳಲ್ಲಿ ನಿಲಯವಾರು ಅರ್ಜಿಗಳನ್ನು ಸ್ವೀಕರಿಸುವ ಬದಲು ತಾಲ್ಲೂಕುವಾರು ಅರ್ಜಿಗಳನ್ನು ಆಹ್ವಾನಿಸಿ, ಸಿ.ಇ.ಟಿ ಕೌನ್ಸಿಲಿಂಗ್ ಮಾದರಿಯಲ್ಲಿ ಪ್ರವೇಶ ಕಲ್ಪಿಸಲು ಆದೇಶಿಸಲಾಗಿದೆ ಅದರಂತೆ, ಪ್ರಸ್ತುತ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾಂತರ ಇಲಾಖೆಗಳ ವಿದ್ಯಾರ್ಥಿನಿಲಯಗಳಿಗೆ SHP(State hostel portal) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.
- 2024-25ನೇ ಸಾಲಿನಿಂದ ಸರ್ಕಾರದ ಆದೇಶ ಸಂಖ್ಯೆ: ಸಕಇ 143 ಪಕವಿ 2023, ದಿನಾಂಕ:20.12.2023 ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ/ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಹಾಗೂ ಡಾ|| ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯ ಪ್ರವೇಶಾತಿಯನ್ನು ಈ ಹಿಂದೆ ಅನುಸರಿಸುತ್ತಿದ್ದ ತಂತ್ರಾಂಶವಾದ Hostel Management Information System (HMIS) ಮೂಲಕವೇ ಕೈಗೊಳ್ಳಲು ಆದೇಶಿಸಿದೆ. ಅದರಂತೆ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ವ್ಯವಸ್ಥೆಯನ್ನು ಆನ್‌ಲೈನ್ ಮೂಲಕ ಇಲಾಖೆ ವೆಬ್‌ಸೈಟ್‌ನ Hostel Management Information System (HMIS) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.
- ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಮಂಜೂರಾತಿ ಸಂಖ್ಯೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾಗುವ ವಿದ್ಯಾರ್ಥಿ ನಿಲಯಗಳ ಕಟ್ಟಡದ ಸಾಮರ್ಥ್ಯನುಸಾರ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದ್ದು, ಹೆಚ್ಚುವರಿ ವಿದ್ಯಾರ್ಥಿಗಳನ್ನು ಬಾಡಿಗೆ ಕಟ್ಟಡ ಪಡೆದು ಪ್ರವೇಶಾತಿ ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.
- ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ:ಸಕನಿ:ಇಡಿ-6:ಕ.ಬಾಡಿಗೆ:ಸಿಆರ್ :02/2018-19 ದಿನಾಂಕ:09.05.2019 ರಲ್ಲಿ ಹೆಚ್ಚುವರಿ ಬಾಡಿಗೆ ಕಟ್ಟಡವನ್ನು ಪಡೆಯುವ ಸಂದರ್ಭದಲ್ಲಿ ಸದರಿ ಕಟ್ಟಡದಲ್ಲಿನ ವಿದ್ಯಾರ್ಥಿಗಳ ಕೊಠಡಿ, ಅಡುಗೆ ಕೋಣೆ, ಉಗ್ರಾಣ, ಊಟದ ಕೊಠಡಿ, ಶೌಚಾಲಯ, ಸ್ನಾನದಗೃಹ, ವಾಸದ ಕೊಠಡಿ, ಕಂಪ್ಯೂಟರ್/ರಿಡಿಂಗ್ ರೂಂ, ಮೆಡಿಕಲ್ ರೂಂ ಮತ್ತು ಆಫೀಸ್ ರೂಂಗಳು ಯಾವ ಯಾವ ವಿಸ್ತೀರ್ಣವನ್ನು ಒಳಗೊಂಡಿರಬೇಕು ಎಂಬುದರ ಬಗ್ಗೆ ಸುತ್ತೋಲೆಯನ್ನು ಹೊರಡಿಸಲಾಗಿದೆ. ಅದರಂತೆಯೇ ಹೆಚ್ಚುವರಿ ಬಾಡಿಗೆ ಕಟ್ಟಡಗಳನ್ನು ಪಡೆಯಲು ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಇವರಿಗೆ ನಿರ್ದೇಶನ ನೀಡಲಾಗಿರುತ್ತದೆ.

**ಸಿಬ್ಬಂದಿ ವಿವರ:-**

| ವಾರ್ಡನ್ ಖಾಲಿ ಹುದ್ದೆಗಳ ಸಂಖ್ಯೆ | ವಾರ್ಡನ್ (ಪುರುಷ) | | ವಾರ್ಡನ್ (ಮಹಿಳೆ) | |
|---|---|---|---|---|
| | ನೇರ ನೇಮಕಾತಿ | ಮುಂಬಡ್ತಿ | ನೇರ ನೇಮಕಾತಿ | ಮುಂಬಡ್ತಿ |
| 572 | 290 | 195 | 27 | 60 |

ಚಾಲ್ತಿಯಲ್ಲಿರುವ ಇಲಾಖಾ ವೃಂದ ಮತ್ತು ನೇಮಕಾತಿ ನಿಯಮಗಳು 2022 ರ ಯ ವಾರ್ಡನ್ (ಪುರುಷ) ಹಾಗೂ ವಾರ್ಡನ್ (ಮಹಿಳೆ) ಎಂಬ ಪ್ರತ್ಯೇಕ ಹುದ್ದೆಗಳಿದ್ದು ಶೇಕಡಾ 80% ರಷ್ಟು ಹುದ್ದೆಗಳನ್ನು ಯಾವುದೇ ಪದವಿ ವಿದ್ಯಾರ್ಹತೆಯೊಂದಿಗೆ ಬಿ.ಇಡಿ ಹೊಂದಿದ ಅಭ್ಯರ್ಥಿಗಳಿಂದ ನೇರ ನೇಮಕಾತಿ ಮೂಲಕ ಹಾಗೂ ಶೇ 20% ರಷ್ಟು ಹುದ್ದೆಗಳನ್ನು ಪದವಿ ವಿದ್ಯಾರ್ಹತೆಯೊಂದಿಗೆ ಈ ಮುಂದಿನ ಪೋಷಕ ವೃಂದದ ಹುದ್ದೆಗಳಿಂದ ಕ್ರಮವಾಗಿ ವಸತಿ ಶಾಲಾ ಶಿಕ್ಷಕರಿಂದ ಶೇ 10% ರಷ್ಟು ಹಾಗೂ ಶೇ. 10% ರಷ್ಟು ಜೂನಿಯರ್ ವಾರ್ಡನ್ ಹುದ್ದೆಯಲ್ಲಿನ ನೌಕರರುಗಳಿಂದ ಭರ್ತಿಗೆ ಅವಕಾಶ ಕಲ್ಪಿಸಲಾಗಿದೆ.

ಪ್ರಸ್ತುತ ವಾರ್ಡನ್ (ಪುರುಷ) ವೃಂದದಲ್ಲಿ 1282 ಮಂಜೂರಾತಿ ಇದ್ದು, ಭರ್ತಿ 797 ಇದ್ದು, ಖಾಲಿ 485 ಇರುತ್ತದೆ. ವಾರ್ಡನ್ (ಮಹಿಳೆ) ವೃಂದದಲ್ಲಿ 549 ಮಂಜೂರಾತಿ ಇದ್ದು, 462 ಹುದ್ದೆಗಳ ಭರ್ತಿ ಇದ್ದು, 87 ಖಾಲಿ ಇರುತ್ತವೆ. ಒಟ್ಟಾರೆಯಾಗಿ 572 ವಾರ್ಡನ್ ಹುದ್ದೆಗಳು ಖಾಲಿ ಇರುತ್ತವೆ. 572 ಖಾಲಿ ಹುದ್ದೆಗಳ ಪೈಕಿ ನೇರ ನೇಮಕಾತಿಗೆ 317 ಹಾಗೂ ಮುಂಬಡ್ತಿಗೆ 255 ಹುದ್ದೆಗಳು ಖಾಲಿ ಇರುತ್ತವೆ.

ಆಗಸ್ಟ 2023 ನೇ ಸಾಲಿನಲ್ಲಿ ಕೆ.ಪಿ.ಎಸ್.ಸಿ. ವತಿಯಿಂದ 140 (ಉಳಿಕೆ ಮೂಲ ವೃಂದ 80 ಹಾಗೂ ಕಲ್ಯಾಣ ಕರ್ನಾಟಕ 60) ವಾರ್ಡನ್ ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ ನಿರೀಕ್ಷಿಸಿ ಆಗ ಲಭ್ಯವಿದ್ದ 232 ವಾರ್ಡನ್ (ಪುರುಷ) ಖಾಲಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

ಮುಂದುವರೆದು ಮುಂಬಡ್ತಿ ಕೋಟಾದಡಿ 255 ಹುದ್ದೆಗಳು ಲಭ್ಯವಿರುತ್ತವೆ. ಮುಂಬಡ್ತಿಗೆ ಪದವಿ ವಿದ್ಯಾರ್ಹತೆ ಹಾಗೂ 05 ವರ್ಷ ಅರ್ಹತಾದಾಯಕ ಸೇವೆ ಹೊಂದಿದ ಜೂನಿಯರ್ ವಾರ್ಡನ್ ಮತ್ತು ವಸತಿ ಶಾಲಾ ಶಿಕ್ಷಕರಿಂದ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದರಲ್ಲಿ 182 ವಾರ್ಡನ್ ಹುದ್ದೆಗಳನ್ನು ಜೂನಿಯರ್ ವಾರ್ಡನ್ ವೃಂದದಿಂದ ಹಾಗೂ 73 ವಸತಿ ಶಾಲಾ ಶಿಕ್ಷಕರಿಂದ ಭರ್ತಿ ಮಾಡಬೇಕಾಗಿರುತ್ತದೆ. ಆದರೆ ಪದವಿ ವಿದ್ಯಾರ್ಹತೆ ಹೊಂದಿದ ಜೂನಿಯರ್ ವಾರ್ಡನ್ ಹಾಗೂ 05 ವರ್ಷ ಪೂರ್ಣಗೊಳಿಸಿದ ವಸತಿ ಶಾಲಾ ಶಿಕ್ಷಕರು ಲಭ್ಯವಿಲ್ಲದ ಕಾರಣ 255 ಮುಂಬಡ್ತಿ ಕೋಟಾದ ವಾರ್ಡನ್ ಹುದ್ದೆಗಳು ಖಾಲಿ ಉಳಿದಿರುತ್ತವೆ.

ಪ್ರಸ್ತುತ ದಿನಾಂಕ:30/09/2024 ರ ಪತ್ರದಲ್ಲಿ 2023ನೇ ಸಾಲಿನಲ್ಲಿ ಸ್ವೀಕೃತಗೊಂಡಿದ್ದ 140 ವಾರ್ಡನ್ ಅಂತಿಮ ಆಯ್ಕೆ ಪಟ್ಟಿಯಲ್ಲಿನ ನೇಮಕಾತಿಗೆ ಹಾಜರಾಗದೇ ಉಳಿದ 34 ಅಭ್ಯರ್ಥಿಗಳ ಹೆಚ್ಚುವರಿ ಪಟ್ಟಿಗೆ ಆಯ್ಕೆ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

**ಇಲಾಖೆ ವಿದ್ಯಾರ್ಥಿನಿಲಯಗಳಲ್ಲಿನ ಗುಣಮಟ್ಟವನ್ನು ಅಭಿವೃದ್ಧಿಪಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:-**

- ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಊಟೋಪಚಾರವನ್ನು ನೀಡಲು ಮೂರು ವಿಭಾಗವಾರು (ಕರಾವಳಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ) ಪರಿಷ್ಕೃತ ಮೆನು ಚಾರ್ಟ್ ನಂತೆ ವಿದ್ಯಾರ್ಥಿಗಳಿಗೆ ಊಟೋಪಚಾರವನ್ನು ನೀಡಲಾಗುತ್ತಿದೆ.
- ಸರ್ಕಾರದ ಆದೇಶ ಸಂಖ್ಯೆ:ಸಕಇ 260 ಎಂಡಿಎಸ್ 2024, ದಿನಾಂಕ:06-01-2025 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲಾ/ಕಾಲೇಜುಗಳು ಮತ್ತು ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಮೆನು ಪ್ರಕಾರ ಸಕಾಲದಲ್ಲಿ ಊಟದ ಗುಣಮಟ್ಟ ಮತ್ತು ಸ್ಥಿರತೆಯ ಬಗ್ಗೆ ಪಾರದರ್ಶಕತೆ ಮತ್ತು ಸಾರ್ವಜನಿಕ ಜಾಗೃತಿಯನ್ನು ಖಚಿತಪಡಿಸಿಕೊಳ್ಳಲು ಬೆಳಗಿನ ಉಪಹಾರ, ಮಧ್ಯಾಹ ಮತ್ತು ರಾತ್ರಿ ಊಟಕ ದೈನಂದಿನ ಫೋಟೋಗಳನ್ನು X (Formaly Twitter) ನಲ್ಲಿ Post ಮಾಡಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ಇಲಾಖಾ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ.
- ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023, ದಿನಾಂಕ:05-05-2023 ರಲ್ಲಿ ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ. ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitation committee ಯನ್ನು ರಚಿಸಲಾಗಿರುತ್ತದೆ.
- ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಆದೇಶ ಸಂಖ್ಯೆ:ಸಕನಿ/ಇಡಿ-4/2022-23, ದಿನಾಂಕ:08-01-2024ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಾರ್ಡನ್, ಅಡುಗೆಯವರು ಮತ್ತು ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರು (ಹೊರಸಂಪನ್ಮೂಲ ನೌಕರರು ಸೇರಿದಂತೆ)ಗಳಿಗೆ ಸ್ವಚ್ಛತೆ ಹಾಗೂ ರುಚಿಯಾದ ಅಡುಗೆ ತಯಾರಿಸುವ ಕುರಿತಂತೆ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿರುತ್ತದೆ. ಈ ಸಂಬಂಧ ಪ್ರತಿ ಜಿಲ್ಲೆಗೆ ರೂ.50,000/-ಗಳಂತೆ ಒಟ್ಟು 31 ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

- ಸರ್ಕಾರದ ಆದೇಶ ಸಂಖ್ಯೆ: ಸಕಇ 738 ಪಕವಿ 2024, ದಿನಾಂಕ:30-10-2024ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡಲು 2024-25ನೇ ಸಾಲಿನಿಂದ ಜಿಲ್ಲಾಮಟ್ಟದಲ್ಲಿ ಪ್ರತಿ ಜಿಲ್ಲೆಯನ್ನು ಘಟಕವನ್ನಾಗಿಸಿ ಪ್ರತಿ 02 ತಿಂಗಳಿಗೊಮ್ಮೆ ಕಡ್ಡಾಯವಾಗಿ ಟೆಂಡರ್ ಕರೆಯುವಂತೆ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಿ ಆದೇಶಿಸಿದೆ.
- ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ: SWD/EDU/ED7/20/2023 ದಿನಾಂಕ:07-10-2023ರಲ್ಲಿ Freak Rate ನಮೂದಿಸುವ ಬಿಡ್‌ದಾರರನ್ನು ತಿರಸ್ಕರಿಸಲು ಮಾರ್ಗಸೂಚಿಯನ್ನು ಹಾಗೂ ಗುತ್ತಿಗೆದಾರರು ಸರಬರಾಜು ಮಾಡುವ ಆಹಾರ ಪದಾರ್ಥಗಳ ಮಾದರಿಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಪ್ರದರ್ಶಿಸಲು ಸುತ್ತೋಲೆ ಹೊರಡಿಸಲಾಗಿರುತ್ತದೆ.
- ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: SWD 198 RI 2022, ದಿನಾಂಕ: 18-02-2025 ರನ್ವಯ ಪ್ರತಿ ಜಿಲ್ಲೆಗೆ ರಾಜ್ಯ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜನೆ ಆದೇಶಿಸಲಾಗಿದೆ.
- ಸರ್ಕಾರದ ಆದೇಶ ಸಂಖ್ಯೆ:SWD/EDU/ED4/80/2023, ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶಿಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಭೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ.
- ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಸುತ್ತೋಲೆ ಸಂಖ್ಯೆ: SWD/ SCHC/ SC/ 23/ 2023 ದಿನಾಂಕ:19-09-2023 ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಿದ್ಧಪಡಿಸಲಾಗುತ್ತಿರುವ ಆಹಾರದ ಗುಣಮಟ್ಟ ಕಾಯ್ದುಕೊಳ್ಳುವ ಸಂಬಂಧ Taste Register (ರುಚಿ ಪರಿಶೀಲನಾ ವಹಿ)ಯನ್ನು ನಿರ್ವಹಿಸುವಂತೆ ಸೂಚಿಸಿದೆ.
- ಸರ್ಕಾರದ ಆದೇಶ ಸಂಖ್ಯೆ:ಸಕಇ 914 ಪಕವಿ 2024, ದಿನಾಂಕ:02-01-2025 ರಲ್ಲಿ ಇಲಾಖೆಯ ವಿದ್ಯಾರ್ಥಿನಿಲಯಗಳನ್ನು ಸಮರ್ಪಕ ಕಾರ್ಯನಿರ್ವಹಣೆಗೆ ಬೆಂಬಲ ಹಾಗೂ ಮಾರ್ಗದರ್ಶನವನ್ನು ನೀಡುವ ಸಲುವಾಗಿ ತಾಲ್ಲೂಕಿನ ಶಾಲೆಗಳ ಮುಖ್ಯೋಪಾಧ್ಯಾಯರು, ಗ್ರಾಮಪಂಚಾಯತ್ PDO, ಪುರಸಭೆ/ನಗರ ಸಭೆ ಮುಖ್ಯಾಧಿಕಾರಿಗಳು, ಕ್ಲಸ್ಟರ್ ಸಂಪನ್ಮೂಲ ಅಧಿಕಾರಿ ಮತ್ತು ತಾಲ್ಲೂಕು/ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರ ಸದಸ್ಯರುಗಳು ಸೇರಿದಂತೆ ಪ್ರತಿ ವಿದ್ಯಾರ್ಥಿನಿಲಯದಲ್ಲಿ "ವಿದ್ಯಾರ್ಥಿನಿಲಯ ನಿರ್ವಹಣಾ ಸಮಿತಿ"ಯನ್ನು ರಚಿಸಿ ಆದೇಶಿಸಲಾಗಿದೆ.
- ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯವಲಯದಿಂದ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.
- ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

- **ಕೊಠಡಿ ಹಾಗೂ ಶೌಚಾಲಯ:** ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ವಾಸದ ಕೊಠಡಿ, ಶೌಚಾಲಯ, ಸ್ನಾನಗೃಹಗಳನ್ನು ನಿರ್ಮಾಣ ಹಾಗೂ ಅಗತ್ಯ ದುರಸ್ತಿ/ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧವಾಗಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಸೂಕ್ತ ಪ್ರಸ್ತಾವನೆ ಪಡೆದು ಅನುದಾನ ಲಭ್ಯತೆಯನ್ನು ಆಧರಿಸಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿ 823 (504- ಪ.ಜಾತಿ, 144-ಪ.ವರ್ಗ & ಹಿಂವರ್ಗ-175) ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳ ಪೈಕಿ 651 (401-ಪ.ಜಾತಿ, 113-ಪ.ವರ್ಗ & ಹಿಂವರ್ಗ-137) ವಸತಿ ಶಾಲೆ/ಕಾಲೇಜುಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ. ಉಳಿದ 171 ವಸತಿ ಶಾಲೆಗಳ ಪೈಕಿ, 145 ವಸತಿ ಶಾಲೆ/ಕಾಲೇಜುಗಳು ಆಯಾ ಪ್ರದೇಶದಲ್ಲಿ ವಸತಿ ಶಾಲೆ/ಕಾಲೇಜುಗಳನ್ನು ನಡೆಸಲು ಜಿಲ್ಲಾ ಮಟ್ಟದ ಅಧಿಕಾರಿಗಳು ಸೂಕ್ತ ವ್ಯವಸ್ಥೆಯನ್ನು ಹೊಂದಿರುವ ಕಟ್ಟಡಗಳನ್ನು ಬಾಡಿಗೆ ಪಡೆದು ನಡೆಸಲಾಗುತ್ತಿದೆ. ಶಾಲೆ/ಕಾಲೇಜುಗಳನ್ನು ನಡೆಸಲು ಸೂಕ್ತ ಬಾಡಿಗೆ ಕಟ್ಟಡ ದೊರೆತಿಲ್ಲದಿರುವುದರಿಂದ 27 ವಸತಿ ಶಾಲೆಗಳು ಬಾಡಿಗೆ ರಹಿತ/ಸಂಘದ ಸ್ವಂತ ಕಟ್ಟಡದಲ್ಲಿರುವ ವಸತಿ ಶಾಲೆಗಳೊಂದಿಗೆ ಸಂಯೋಜಿತವಾಗಿ ಕಾರ್ಯನಿರ್ವಹಿಸುತ್ತಿವೆ.

59 ಕಟ್ಟಡ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ ಹಾಗೂ ಲೋಕೋಪಯೋಗಿ/ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ವಹಿಸಲಾಗಿರುವ 20 ವಸತಿ ಶಾಲೆಗಳು ಸೇರಿ ಒಟ್ಟು 79 ವಸತಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ.

22 ವಸತಿ ಶಾಲೆ/ಕಾಲೇಜುಗಳ ಶಾಲಾ ಸಂಕೀರ್ಣ ನಿರ್ಮಾಣ ಮಾಡಲು ಟೆಂಡರ್ ಪ್ರಕ್ರಿಯೆಯಲ್ಲಿವೆ. ಉಳಿದಂತೆ ನಿವೇಶನ ಲಭ್ಯವಿರುವ 61 ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಅನುಮೋದನೆ ನೀಡಲಾಗಿದೆ. 09 ವಸತಿ ಶಾಲೆ/ಕಾಲೇಜುಗಳಿಗೆ ನಿವೇಶನ ಲಭ್ಯವಿರುವುದಿಲ್ಲ. ಸೂಕ್ತ ನಿವೇಶನ ಒದಗಿಸುವಂತೆ ಸೂಚಿಸಿ, ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ.

ಸ್ವಂತ ಕಟ್ಟಡ ಹೊಂದಿರುವ 25 ವಸತಿ ಶಾಲೆ/ಕಾಲೇಜುಗಳ ಕಟ್ಟಡ ದುರಸ್ಥಿ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, ಪ್ರಗತಿಯಲ್ಲಿರುತ್ತದೆ ಹಾಗೂ 144 ವಸತಿ ಶಾಲೆ/ಕಾಲೇಜುಗಳ ಕಟ್ಟಡ ದುರಸ್ಥಿ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿರುತ್ತವೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡತ್ತಿರುವ ಪ್ರತಿ ವಿದ್ಯಾರ್ಥಿಗೆ ತಿಂಗಳಿಗೆ ರೂ.1850/- ರಂತೆ ಬೋಜನಾ ವೆಚ್ಚವನ್ನು ನಿಗದಿಪಡಿಸಿರುವಂತೆ ಪ್ರಾದೇಶಿಕವಾರು ಆಹಾರ ಪದ್ಧತಿ ಕ್ರಮಗಳಂತೆ ದಿನನಿತ್ಯ ಮೆನು ಚಾರ್ಟ ಪ್ರಕಾರ ಉತ್ತಮ ಗುಣಮಟ್ಟದ ಆಹಾರವನ್ನು ಒದಗಿಸಲಾಗುತ್ತಿದೆ. ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಸತಿ ಶಾಲೆ/ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತಿರುವ ಊಟದ ಗುಣಮಟ್ಟ ಮತ್ತು ಸ್ಥಿರತೆಯ ಬಗ್ಗೆ ಪಾರದರ್ಶಕತೆ ಮತ್ತು ಸಾರ್ವಜನಿಕ ಜಾಗೃತಿಯನ್ನು ಖಚಿತಪಡಿಸಿಕೊಳ್ಳಲು ರಾಜ್ಯಾದ್ಯಂತ ವಸತಿ ಶಾಲೆ/ಕಾಲೇಜುಗಳ ವಾರ್ಡನ್‌ಗಳು ಬೆಳಗಿನ ಉಪಹಾರ, ಮಧ್ಯಾಹ್ನ ಮತ್ತು ರಾತ್ರಿ ಊಟದ ದೈನಂದಿನ ಫೋಟೋಗಳನ್ನು X (formerly twitter) ನಲ್ಲಿ ಪೋಸ್ಟ್ ಮಾಡಲು ಆದೇಶಿಸಲಾಗಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ.

2024-25ನೇ ಸಾಲಿನ ಆಯವ್ಯಯದಲ್ಲಿ ಪ್ರತಿ ವಿದ್ಯಾರ್ಥಿಗೆ, ಪ್ರತಿ ಮಾಹೆ ರೂ.100/-ಗಳ ವೆಚ್ಚದಲ್ಲಿ ವಿದ್ಯಾರ್ಥಿಗಳ ಪೌಷ್ಟಿಕಾಂಶ ಮೌಲ್ಯ ಹೆಚ್ಚಿಸಲು ಮತ್ತು ಆರೋಗ್ಯ ಬಲವರ್ಧನೆಗಾಗಿ ಸಂಘದ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಮಾಹೆಯಾನ ರೂ.100/- ಗಳಲ್ಲಿ ಶೇ.25%ರಷ್ಟು ವೆಚ್ಚದಲ್ಲಿ ಶೇಂಗಾ ಚಿಕ್ಕಿ ಮತ್ತು ಇನ್ನುಳಿದ ಶೇ.75% ರಷ್ಟರಲ್ಲಿ ಪೌಷ್ಟಿಕಾಂಶದ ಪುಡಿಯನ್ನು ಪೂರೈಸಲು ಅನುಮೋದನೆ ನೀಡಲಾಗಿದೆ.

2024-25ನೇ ಸಾಲಿನಲ್ಲಿ ವಸತಿ ಶಾಲೆ/ಕಾಲೇಜುಗಳಲ್ಲಿ 211920 ವಿದ್ಯಾರ್ಥಿಗಳ ಸಂಖ್ಯೆ ಮಂಜೂರಾಗಿದ್ದು, ಈ ಪೈಕಿ 200710 ವಿದ್ಯಾರ್ಥಿಗಳು ದಾಖಲಾಗಿ ವ್ಯಾಸಂಗ ಮಾಡುತ್ತಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಡಿ ಬರುವ ವಸತಿ ಶಾಲೆಗಳಲ್ಲಿ 6 ನೇ ತರಗತಿಗೆ ನಿಗದಿಯಾಗಿರುವ ಸೀಟುಗಳಲ್ಲಿ 2025-26 ನೇ ಸಾಲಿನಲ್ಲಿ 817 ವಸತಿ ಶಾಲೆಗಳ 6ನೇ ತರಗತಿಗೆ 41,500 ಸೀಟುಗಳು ಪ್ರವೇಶಾತಿಗೆ ಅರ್ಜಿಗಳನ್ನು ಆಹ್ವಾನಿಸಿದೆ. ಈ ಪೈಕಿ ಶೇ. 50 ರಷ್ಟು ಸೀಟುಗಳನ್ನು ವಿಶೇಷ ವರ್ಗಗಳಿಗೆ ಸೇರಿದ ಸಫಾಯಿ ಕರ್ಮಚಾರಿ/ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್/ ಚಿಂದಿ ಆಯುವವರು/ ಸ್ಮಶಾನ ಕಾರ್ಮಿಕರ ಮಕ್ಕಳಿಗೆ /ಬಾಲ ಕಾರ್ಮಿಕರು/ಜೀತ ವಿಮುಕ್ತ ಕಾರ್ಮಿಕರ ಮಕ್ಕಳು/ ಗುರುತಿಸಿರುವ ಮಾಜಿ ದೇವದಾಸಿಯರ ಮಕ್ಕಳು/25% ಕ್ಕಿಂತ ಹೆಚ್ಚಿನ ಅಂಗಲವಿಕಲತೆ ಹೊಂದಿರುವ ಮಕ್ಕಳು/ ಹೆಚ್.ಐ.ವಿ ಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು/ ಗುರುತಿಸಿರುವ ಅಲೆಮಾರಿ/ಅರೆ ಅಲೆಮಾರಿ/ಸೂಕ್ಷ್ಮ-ಅತೀ ಸೂಕ್ಷ್ಮ ಸಮುದಾಯದ/ಸೈನಿಕರು ಮತ್ತು ಮಾಜಿ ಸೈನಿಕರು/ ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು/ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ನೇರ ಪ್ರವೇಶಾತಿ ಕಲ್ಪಿಸಲಾಗಿದೆ ಹಾಗೂ ಉಳಿದ ಶೇ 50% ಸೀಟುಗಳನ್ನು ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳು, ಅನ್ವಯಿಸುವ ಮೀಸಲಾತಿ ಮತ್ತು ಶಾಲಾ ಆದ್ಯತೆ ಆಧಾರದ ಮೇಲೆ Computerized Auto Selection ಮೂಲಕ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ, ಆನ್ಲೈನ್ ಮೂಲಕ ಸೀಟು ಹಂಚಿಕೆ ಮಾಡಲಾಗುತ್ತಿದೆ.

2023-24ನೇ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 798 ವಸತಿ ಶಾಲೆಗಳಲ್ಲಿ ಒಟ್ಟು 35,303 SSLC ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 33,891 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶೇ. 96 ರಷ್ಟು, 360 ವಸತಿ ಶಾಲೆಗಳಲ್ಲಿ ಶೇ. 100 ರಷ್ಟು ಫಲಿತಾಂಶ ಬಂದಿರುತ್ತದೆ. ಮೊರಾರ್ಜಿ ದೇಸಾಯಿ ವಸತಿ ಶಾಲೆ ಮೆಳ್ಳಿಗೇರಿ, ಮುಧೋಳ್ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿನಿಯು 625 ಅಂಕಗಳಿಗೆ 625 ಅಂಕಗಳನ್ನು ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿರುತ್ತಾರೆ ಹಾಗೂ ಮಂಡ್ಯ ಜಿಲ್ಲೆ ತುಂಬಗೆರೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಒಬ್ಬ ವಿದ್ಯಾರ್ಥಿಯು 625 ಅಂಕಗಳಿಗೆ 623 ಅಂಕಗಳನ್ನು ಪಡೆದು ದ್ವಿತಿಯ ಸ್ಥಾನ ಪಡೆದಿರುತ್ತಾರೆ. ಒಟ್ಟಾರೆ 27,704 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಮತ್ತು ಪ್ರಥಮ ದರ್ಜೆ ಯಲ್ಲಿ ಉತ್ತೀರ್ಣರಾಗಿರುತ್ತಾರೆ.

2023-24ನೇ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 84 ಪದವಿ ಪೂರ್ವ ವಿಜ್ಞಾನ ಕಾಲೇಜುಗಳ ದ್ವಿತೀಯ ಪಿಯುಸಿ ಒಟ್ಟಾರೆ ಫಲಿತಾಂಶ ಶೇ.97.68 ಆಗಿರುತ್ತದೆ. 40 ಪದವಿ ಪೂರ್ವ ವಿಜ್ಞಾನ ಕಾಲೇಜುಗಳಲ್ಲಿ ಶೇ. 100ಕ್ಕೆ ಶೇ.100 ರಷ್ಟು ಫಲಿತಾಂಶ ಬಂದಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಿಗೆ 19149 ಬೋಧಕ/ ಬೋಧಕೇತರ, ಗ್ರೂಪ್ "ಡಿ" ವೃಂದದ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 6474 ಖಾಯಂ ಬೋಧಕ/ ಬೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಬಾಕಿ ಉಳಿದ ಹುದ್ದೆಗಳಲ್ಲಿ ಅತಿಥಿ ಶಿಕ್ಷಕರು/ ಉಪನ್ಯಾಸಕರು ಹಾಗೂ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿರುತ್ತಾರೆ.

| **ವೃಂದ** | **ಮಂಜೂರಾದ ಸಂಖ್ಯೆ:** | **ಖಾಯಂ ಸಿಬ್ಬಂದಿಗಳ ಸಂಖ್ಯೆ** | **ಅತಿಥಿ ಶಿಕ್ಷಕರು/ ಉಪನ್ಯಾಸಕರ ಸಂಖ್ಯೆ** | **ಹೊರ ಸಂಪನ್ಮೂಲ ಸಿಬ್ಬಂದಿಗಳ ಸಂಖ್ಯೆ** |
|---|---|---|---|---|
| ಬೋಧಕ ಸಿಬ್ಬಂದಿ | 8863 | 5384 | 2617 | 463 |
| ಬೋಧಕೇತರ ಸಿಬ್ಬಂದಿ | 2282 | 1086 | 0 | 945 |
| ಗ್ರೂಪ್ 'ಡಿ | 8004 | 4 | 0 | 7932 |
| **ಒಟ್ಟು** | **19149** | **6474** | **2617** | **9340** |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿರುವ ವಸತಿ ಶಾಲೆಗಳಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ 2756 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅಭಿಪ್ರಾಯ ಕೋರಲಾಗಿ ಆರ್ಥಿಕ ಇಲಾಖೆಯು 875 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಿದ್ದು, ಅದರಂತೆ ಕ್ರಮವಹಿಸಲಾಗುತ್ತಿದೆ. ಪ್ರಸ್ತುತ ವಸತಿ ಶಾಲೆಗಳಲ್ಲಿ 738 ನಿಲಯಪಾಲಕರ ಹುದ್ದೆಗಳು ಮಂಜೂರಾಗಿದ್ದು, 397 ಖಾಯಂ ನಿಲಯಪಾಲಕರು ಕಾರ್ಯನಿರ್ವಹಿಸುತ್ತಿದ್ದು, ಖಾಲಿ ಇರುವ ವಸತಿ ಶಾಲೆಗಳಲ್ಲಿ ಆಯಾ ಶಾಲೆಗಳ ಹಿರಿಯ ಶಿಕ್ಷಕರನ್ನು ಹೆಚ್ಚುವರಿ ಪ್ರಭಾರವಹಿಸಿ ಕಾರ್ಯನಿರ್ವಹಿಸಲು ಸೂಚಿಸಲಾಗಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಆಹಾರ, ಸಮವಸ್ತ್ರ, ಶೂ, ಸಾಕ್ಸ್, ಪಠ್ಯಪುಸ್ತಕ, ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು, ಶುಚಿ ಕಿಟ್‌ಗಳನ್ನು ನಿರಂತರವಾಗಿ ಪೂರೈಕೆ ಮಾಡಲಾಗುತ್ತಿದೆ. ಅಲ್ಲದೆ ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆ/ ಕಾಲೇಜುಗಳ ವಿದ್ಯಾರ್ಥಿಗಳಿಗೆ ಡೆಸ್ಕ್ ಕಂ ಬೆಂಚ್, ಟು-ಟಯರ್ ಕಾಟ್, ಹಾಸಿಗೆ, ದಿಂಬು, ಡೈನಿಂಗ್ ಟೇಬಲ್ ಹಾಗೂ ಇತರೆ ಮೂಲಭೂತ ಸೌಲಭ್ಯಗಳನ್ನು ಹಂತ ಹಂತವಾಗಿ ಅನುದಾನದ ಲಭ್ಯತೆ ಆದಾರದ ಮೇಲೆ ಒದಗಿಸಲಾಗುತ್ತಿದೆ. ಅದರಂತೆ ಬಾಡಿಗೆ ಕಟ್ಟಡಗಳಲ್ಲಿರುವ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಸಹ ಅನುದಾನ ಲಭ್ಯತೆ ಮೇರೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ 821 ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ, ಆಹಾರ ಮತ್ತಿತರ ಅವಶ್ಯ ಮೂಲಭೂತ ಸೌಲಭ್ಯಗಳನ್ನು ಅನುದಾನ ಲಭ್ಯತೆಯ ಅನುಸಾರ ಒದಗಿಸಲಾಗುವುದು ಹಾಗೂ ವಸತಿ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಉತ್ತಮ ಕಲಿಕೆಗೆ ಮುಕ್ತ ಅವಕಾಶವನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಒಟ್ಟಾರೆಯಾಗಿ ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಕ್ರಮಕೈಗೊಳ್ಳಲಾಗುತ್ತಿದೆ.

**ಸಕಇ 77 ಎಂಡಿಎಸ್ 2025**

**(ಡಾ. ಹೆಚ್.ಸಿ ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು.**